## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ವೈ.ಎ. ನಾರಾಯಣಸ್ವಾಮಿ ಇವರಿಂದ ನಿಯಮ-72 ರಡಿಯಲ್ಲಿ ನೀಡಲಾದ ಗಮನ ಸೆಳೆಯುವ ಸೂಚನೆಗೆ ಉತ್ತರ.

**ಗಮನ ಸೆಳೆಯುವ ಸೂಚನೆ:-**

ಕಾರ್ಮಿಕ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕಟ್ಟಡ ಕಾರ್ಮಿಕ ಮಂಡಳಿಯಲ್ಲಿ ಸಾವಿರಾರು ಕೋಟಿ ರೂಪಾಯಿ ಕಲ್ಯಾಣ ನಿಧಿ ಇದ್ದರೂ ಸಹ ಸುಮಾರು ವರ್ಷಗಳಿಂದ ಈ ಹಣವನ್ನು ಬಳಕೆ ಮಾಡದೆ ಕಾರ್ಮಿಕರಿಗೋಸ್ಕರ, ಅವರ ಮಕ್ಕಳ ಭವಿಷ್ಯಕೋಸ್ಕರ ಮತ್ತು ಅವರ ಕ್ಷೇಮಾಭಿವೃದ್ಧಿಗಾಗಿ ಯಾವುದೇ ಗಂಭೀರವಾದ ಪ್ರಯತ್ನ ಮಾಡದಿರುವ ಬಗ್ಗೆ ಮಾನ್ಯ ಕಾರ್ಮಿಕ ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಸುಂಕ ಕಾಯ್ದೆ 1996 ಹಾಗೂ ನಿಯಮಗಳು 1998 ರನ್ವಯ ನಿರ್ಮಾಣ ಕಾಮಗಾರಿಯನ್ನು ನಡೆಸುತ್ತಿರುವ ಎಲ್ಲಾ ನಿಯೋಜಕರು ಮತ್ತು ಮಾಲೀಕರಿಂದ ನಿರ್ಮಾಣ ವೆಚ್ಚದ ಶೇ.1 ರಷ್ಟು ಸುಂಕವನ್ನು ಮಂಡಳಿಯ ನಿಧಿಗೆ ಪಾವತಿಸಬೇಕಾಗಿರುತ್ತದೆ. ಅದರಂತೆ 2007 ರಿಂದ 2020 ರವರೆಗೆ ಮಂಡಳಿಯಲ್ಲಿ ಒಟ್ಟು ರೂ.9749.55 ಕೋಟಿಯಷ್ಟು ಸುಂಕವು ಸಂಗ್ರಹವಾಗಿರುತ್ತದೆ.

ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು 2006 ರನ್ವಯ ನೋಂದಾಯಿತ ಕಟ್ಟಡ ಕಾರ್ಮಿಕರಿಗೆ ಈ ಕೆಳಕಂಡ ಸೌಲಭ್ಯಗಳನ್ನು ನೀಡಲಾಗುತ್ತಿದೆ.

1. **ಪಿಂಚಣಿ ಸೌಲಭ್ಯ**
2. **ಕುಟುಂಬ ಪಿಂಚಣಿ ಸೌಲಭ್ಯ**
3. **ದುರ್ಬಲತೆ ಪಿಂಚಣಿ**
4. **ಟ್ರೈನಿಂಗ್-ಕಮ್-ಟೂಲ್‌ಕಿಟ್ ಸೌಲಭ್ಯ (ಶ್ರಮ ಸಾಮರ್ಥ್ಯ)**
5. **ಶ್ರಮ ಸಂಸಾರ ಸಾಮರ್ಥ್ಯ ತರಬೇತಿ ಸೌಲಭ್ಯ:**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹ ಭಾಗ್ಯ):**
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀ ಬಾಂಡ್):**
8. **ಶಿಶು ಪಾಲನಾ ಸೌಲಭ್ಯ**
9. **ಅಂತ್ಯಕ್ರಿಯೆ ವೆಚ್ಚ**
10. **ಶೈಕ್ಷಣಿಕ ಸಹಾಯಧನ (ಕಲಿಕೆ ಭಾಗ್ಯ):**
11. **ವೈದ್ಯಕೀಯ ಸಹಾಯಧನ (ಕಾರ್ಮಿಕ ಆರೋಗ್ಯ ಭಾಗ್ಯ):**
12. **ಅಪಘಾತ ಪರಿಹಾರ:**
13. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ):**
14. **ಮದುವೆ ಸಹಾಯಧನ (ಗೃಹ ಲಕ್ಷ್ಮೀ ಬಾಂಡ್):**
15. **ಬಿಎಂಟಿಸಿ ಬಸ್ ಪಾಸ್ ಸೌಲಭ್ಯ:**
16. **ತಾಯಿ ಮಗು ಸಹಾಯ ಹಸ್ತ:**

ಮೇಲ್ಕಂಡ ವಿವಿಧ ಸೌಲಭ್ಯಗಳನ್ನು ನೀಡಲು 2007 ರಿಂದ ಇಲ್ಲಿಯವರೆಗೆ ರೂ.740,83,21,390.00 ಗಳನ್ನು ಖರ್ಚು ಮಾಡಲಾಗಿರುತ್ತದೆ. ಮಂಡಳಿಯ ಆಡಳಿತಾತ್ಮಕ ವೆಚ್ಚಕ್ಕಾಗಿ ರೂ.111,20,45,187.00 ಖರ್ಚು ಮಾಡಲಾಗಿರುತ್ತದೆ. ಇದಲ್ಲದೆ, ಕೋವಿಡ್-19 ಹರಡುವಿಕೆ ಹಿನ್ನೆಲೆಯಲ್ಲಿ ರಾಜ್ಯಾದ್ಯಂತ ಲಾಕ್‌ಡೌನ್ ಘೋಷಣೆಯಾದ ಸಂದರ್ಭದಲ್ಲಿ ಸಂಕಷ್ಟಕ್ಕೆ ಒಳಗಾದ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಒಂದು ಬಾರಿ ಪರಿಹಾರವಾಗಿ ತಲಾ ರೂ.5,000/- ಗಳಂತೆ 16,48,431 ಕಾರ್ಮಿಕರಿಗೆ ರೂ.824.21 ಕೋಟಿಯಷ್ಟು ಮೊತ್ತವನ್ನು ನೀಡಲಾಗಿರುತ್ತದೆ.

ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಕೊರೋನಾ ವೈರಸ್ ಬಗ್ಗೆ ಅರಿವು ಮೂಡಿಸಲು ಹಾಗೂ ಮಾಸ್ಕ್, ಸ್ಯಾನಿಟೈಸರ್ ಹಾಗೂ ಸೋಪುಗಳನ್ನು ಕಾರ್ಮಿಕರಿಗೆ ವಿತರಣೆ ಮಾಡಲು 41 ಉಪ ವಿಭಾಗ ಮಟ್ಟದ ಕಾರ್ಮಿಕ ಅಧಿಕಾರಿಗಳಿಗೆ ತಲಾ ರೂ.10 ಲಕ್ಷಗಳಂತೆ ಒಟ್ಟು ರೂ.4.25 ಕೋಟಿ ಬಿಡುಗಡೆ ಮಾಡಲಾಗಿರುತ್ತದೆ.

ಮಂಡಳಿಯ ವತಿಯಿಂದ ಬೆಂಗಳೂರಿನಲ್ಲಿ ಸ್ಥಾಪಿಸಲಾಗಿದ್ದ 10 ಶಿಶುಪಾಲನಾ ಕೇಂದ್ರಗಳಲ್ಲಿನ ಮಕ್ಕಳಿಗಾಗಿ Packed Nutrition Food & Toys ಗಳನ್ನು ಪೋಷಕರ ಮನೆಗಳಿಗೆ ತಲುಪಿಸಲಾಗಿರುತ್ತದೆ.

ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಆಹಾರ ಒದಗಿಸಲು ಮತ್ತು ಅವರ ಸಮಸ್ಯೆಗಳನ್ನು ಆಲಿಸಲು 24*7 ಸಹಾಯವಾಣಿ (155214) ಯನ್ನು ಸ್ಥಾಪಿಸಲಾಗಿರುತ್ತದೆ. ಇದಕ್ಕಾಗಿ ರೂ.3.21 ಕೋಟಿಯಷ್ಟು ಮೊತ್ತವನ್ನು ಖರ್ಚು ಮಾಡಲಾಗಿರುತ್ತದೆ.

ವಸತಿ ರಹಿತ ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಜಿಲ್ಲಾಡಳಿತದ ಸಹಕಾರದೊಂದಿಗೆ ವಸತಿ ಸೌಲಭ್ಯ ಮತ್ತು ಊಟವನ್ನು ಒದಗಿಸಲಾಗಿರುತ್ತದೆ. ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ ಲಾಕ್ ಡೌನ್ ಪ್ರಾರಂಭದಿಂದ ಇದುವರೆಗೂ 89.87 ಲಕ್ಷ ಸಿದ್ಧಪಡಿಸಿದ ಆಹಾರದ ಪ್ಯಾಕೆಟ್‌ಗಳನ್ನು ವಿತರಿಸಲಾಗಿರುತ್ತದೆ. ಇದಕ್ಕಾಗಿ ರೂ.26.69 ಕೋಟಿಯಷ್ಟು ಮೊತ್ತವನ್ನು ಖರ್ಚು ಮಾಡಲಾಗಿರುತ್ತದೆ. ಬೆಂಗಳೂರು ನಗರದಲ್ಲಿ ಕಟ್ಟಡ ಮತ್ತು ವಲಸೆ ಕಟ್ಟಡ ಕಾರ್ಮಿಕರಿಗೆ 7.15 ಲಕ್ಷ ಆಹಾರ ಸಾಮಾಗ್ರಿಗಳ ಕಿಟ್‌ಗಳನ್ನು ತಯಾರಿಸಿ ವಿತರಿಸಲಾಗುತ್ತಿದೆ. ಇದಕ್ಕಾಗಿ ರೂ.53.94 ಕೋಟಿಯಷ್ಟು ಮೊತ್ತವನ್ನು ಖರ್ಚು ಮಾಡಲಾಗಿರುತ್ತದೆ.

ವಲಸೆ ಕಟ್ಟಡ ಕಾರ್ಮಿಕರನ್ನು ತಮ್ಮ ತವರು ರಾಜ್ಯಗಳಿಗೆ ವಿಶೇಷ ಶ್ರಮಿಕ ರೈಲುಗಳ ಮೂಲಕ ಕಳುಹಿಸಲು ಅಗತ್ಯ ಕ್ರಮ ಕೈಗೊಂಡಿದ್ದು, ಪ್ರಯಾಣದ ಸಮಯದಲ್ಲಿ ಆಹಾರ ಮತ್ತು ಅಗತ್ಯ ಸೌಲಭ್ಯಗಳನ್ನು ಒದಗಿಸಲಾಗಿರುತ್ತದೆ. ಲಾಕ್‌ಡೌನ್ ಸಮಯದಲ್ಲಿ ಈ ಎಲ್ಲಾ ಸೌಲಭ್ಯಗಳನ್ನು ಒದಗಿಸಲು ರೂ.914,10,44,349.00 ಗಳನ್ನು ಖರ್ಚು ಮಾಡಲಾಗಿರುತ್ತದೆ. ಇಲ್ಲಿಯವರೆಗೆ ಒಟ್ಟಾರೆಯಾಗಿ ಮಂಡಳಿಯ ಸೆಸ್ ನಿಧಿಯಿಂದ ರೂ.2279,23,36,481.00 ಗಳನ್ನು ವಿವಿಧ ಸೌಲಭ್ಯಗಳನ್ನು ನೀಡಲು ಹಾಗೂ ಮಂಡಳಿಯ ಆಡಳಿತಾತ್ಮಕ ವೆಚ್ಚಕ್ಕಾಗಿ ಬಳಸಿಕೊಳ್ಳಲಾಗಿರುತ್ತದೆ.

ಮುಂದುವರೆದು, 29ನೇ ಮಂಡಳಿಯ ಸಭೆಯಲ್ಲಿ 2020-21ನೇ ಸಾಲಿಗೆ ರೂ.2191.63 ಕೋಟಿಗಳ ಆಯವ್ಯಯವನ್ನು ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಭಿತರ ಕ್ಷೇಮಾಭಿವೃದ್ದಿಗಾಗಿ ಅನುಮೋದಿಸಿದೆ. ಸದರಿ ಕಾರ್ಯಕ್ರಮಗಳನ್ನು ಕೈಗೊಳ್ಳಲು ಕ್ರಮ ಜರುಗಿಸಲಾಗುತ್ತಿದೆ.

ಮಂಡಳಿಯಿಂದ ವಿತರಿಸಲಾಗುವ ಸೌಲಭ್ಯಗಳು ನಿಗದಿ ಪಡಿಸಿರುವ ಅರ್ಹತೆಗಳಿಗೆ ಅನುಗುಣವಾಗಿ ಅರ್ಹ ನೋಂದಾಯಿತ ಕಾರ್ಮಿಕರಿಗೆ ನಿರ್ಧಿಷ್ಟ ಸಂದರ್ಭಗಳಲ್ಲಿ ನೀಡಲು ಮಾತ್ರ ಕಾಯ್ದೆ ಮತ್ತು ನಿಯಮಗಳಡಿ ಅವಕಾಶವಿರುತ್ತದೆ. ಆದುದರಿಂದ ಮಂಡಳಿಯಲ್ಲಿ ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಭಿತರ ಕ್ಷೇಮಾಭಿವೃದ್ದಿಗಾಗಿ ಗಂಭೀರ ಪ್ರಯತ್ನ ಮಾಡಲಾಗಿರುತ್ತದೆ.

**ಕಾಇ 30 ಎಲ್‌ಇಟಿ 2021**

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು